**ಸಾಕ್ಷಿಯನ್ನು ದಿಃ 06.08.2019 ರಂದು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ಶ್ರೀ ಕೆಐಬಿ ವಕೀಲರಿಂದಃ**

ನಿಶಾನೆ ಪಿ.18 ರ ಕಚ್ಚಾ ನಕ್ಷೆಯನ್ನು ನಮ್ಮ ವಕೀಲರು ತಯಾಸಿರುತ್ತಾರೆ. ಎಲ್ಲಾ ಜಮೀನುಗಳಿಗೆ ಸಂಬಂಧಿಸಿದಂತೆ ಸರ್ವೆ ಇಲಾಖೆಯಲ್ಲಿ ನಕ್ಷೆ ಇರುತ್ತದೆ ಎಂದರೆ ಸರಿ . ಸಾಕ್ಷಿ ಸ್ವಇಚ್ಚೆಯಿಂದ ಮುಂದುವರಿದು ನಾವು ಖರೀದಿಸಿದ ಜಮೀನಿನ ಗುರುತಿಸುವಿಕೆ ಸಲುವಾಗಿ ಸದರಿ ದಾಖಲೆಯನ್ನು ಹಾಜರುಪಡಿಸಿರುತ್ತೇನೆ ಎಂದು ನುಡಿದಿರುತ್ತಾರೆ. ಸದರಿ ದಾಖಲೆಯನ್ನು ಈ ಹಿಂದೆ 2 ನೇ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ದಾವೆಯನ್ನು ಸಲ್ಲಿಸಿದಾಗ ಹಾಜರುಪಡಿಸಿರುವುದಿಲ್ಲ. ಮೃತ 1 ನೇ ಪ್ರತಿವಾದಿ ಸದರಿ 2 ನೇ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ಸರ್ವೆ ಇಲಾಖೆಯಿಂದ ದೃಢೀಕೃತ ನಕ್ಷೆಯನ್ನು ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿ ಸಾಕ್ಷ್ಯ ನುಡಿದಿರುತ್ತಾನೆ ಎಂದರೆ ಸಾಕ್ಷಿಯು ಸಾಕ್ಷ್ಯ ನುಡಿದಿರುತ್ತಾನೆ ಆದರೆ ಸದರಿ ದಾಖಲೆಯನ್ನು ಹಾಜರುಪಡಿಸುತ್ತಾನೋ ಇಲ್ಲವೋ ಎಂದು ನೆನಪಿರುವುದಿಲ್ಲ ಎಂದು ನುಡಿದಿರುತ್ತಾನೆ. ನಾನು ಹಾಜರುಪಡಿಸಿರುವ ನಿಶಾನೆ ಪಿ.18 ರಲ್ಲಿ ಇರುವ ಸಂಗತಿಗಳು ವಾಸ್ತವಾಂಶದಿಂದ ಕೂಡಿರುವುದಿಲ್ಲ ಎಂದರೆ ಸರಿಯಲ್ಲ. ನಿಶಾನೆ ಪಿ.19 ರಿಂದ ಪಿ.21 ಕ್ಕೆ ಸಂಬಂಧಿಸಿದ ಅಸಲು ದಾಖ್ಲೆಗಳು ಖರೀದಿದಾರರ ಬಳಿ ಇರುತ್ತದೆ. ಸದರಿ ಖರೀದಿದಾರರನ್ನು ಈ ದಾವೆಯಲ್ಲಿ ಪಕ್ಷಕಾರರನ್ನಾಗಿ ಮಾಡಿರುತ್ತೇವೆ. ಅಸಲು ದಾಖಲೆಯನ್ನು ಹಾಜರುಪಡಿಸುವಂತೆ ನಾನು ಅವರ ಮೇಲೆ ಯಾವುದೇ ಕ್ರಮ ತೆಗೆದುಕೊಂಡಿರುವುದಿಲ್ಲ ಸದರಿ ಕ್ರಯಪತ್ರಗಳ ಪ್ರಕಾರ ಕಂದಾಯ ದಾಖಲೆಗಳು ಬದಲಾವಣೆಯಾಗಿದೆಯೋ ಇಲ್ಲವೋ ಎಂದು ಗೊತ್ತಿಲ್ಲ. ಆದರೆ 1 ನೇ ಪ್ರತಿವಾದಿ ಹೆಸರಿಗೆ ಬದಲಾವಣೆಯಾಗಿರುತ್ತದೆ. ನಿಶಾನೆ ಪಿ.19 ರಿಂದ 21 ರ ಪ್ರಕಾರ 1 ನೇ ಪ್ರತಿವಾದಿಯ ವಾರಸುದಾರರಿಗೆ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 2 ನೇ ಪ್ರತಿವಾದಿ ಪರ ಶ್ರೀ ಟಿಎನ್‌ಆರ್ ವಕೀಲರಿಂದಃ

2 ನೇ ಪ್ರತಿವಾದಿ 1 ನೇ ಪ್ರತಿವಾದಿಯಿಂದ ದಿನಾಂಕ 13-04-2005 ರಂದು ನೊಂದಣಿ ಕ್ರಯಪತ್ರದ ಮೂಲಕ ಸದರಿ ಕ್ರಯಪತ್ರದಲ್ಲಿ ತೋರಿಸಿರುವ ಸ್ವತ್ತನ್ನು ಖರೀದಿಸಿರುತ್ತಾನೆ ಎಂದರೆ ಸರಿ. ಸದರಿ ಸ್ವತ್ತನ್ನು ಖರೀದಿಸುವ ಪೂರ್ವದಲ್ಲಿ ಎಲ್ಲಾ ದಾಖಲೆಗಳನ್ನು ಪರಿಶೀಲಿಸಿ ಖರೀದಿಸಿರುತ್ತಾರೆ ಎಂದರೆ ಸರಿಯಲ್ಲ. ದಿನಾಂಕ 15/06/1990 ರಂದು 1 ನೇ ಪ್ರತಿವಾದಿ ನಿಂಗಮ್ಮ ಮತ್ತು ಶಿವಮ್ಮ ರವರಿಂದ ಖರೀದಿಸಿರುತ್ತಾರೆ ಎಂದರೆ ಸರಿ. ಸದರಿ ಸ್ವತ್ತು 1 ನೇ ಪ್ರತಿವಾದಿಯ ಸ್ವಯಾರ್ಜಿತ ಸ್ವತ್ತು ಇರುತ್ತದೆ ಎಂದರೆ ಸರಿಯಲ್ಲ. ಸದರಿ ಆಸ್ತಿಯ ಮೇಲೆ 2 ನೇ ಪ್ರತಿವಾದಿಗೆ ಸಂಪೂರ್ಣ ಹಕ್ಕು ಇರುತ್ತದೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-
ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.